**ಕರ್ನಾಟಕ ಸರ್ಕಾರ**

**ಸಂಖ್ಯೆ:** ಗ್ರಾಅಪ 142 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21-04-2016

**ಸುತ್ತೋಲೆ**

**ವಿಷಯ:** ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ಮತ್ತು ಮಕ್ಕಳ ಮಾರಾಟ ತಡೆ ಸಮಿತಿಯನ್ನು ಬಲಪಡಿಸುವ ಬಗ್ಗೆ.

******

ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸ್ಥಾಯಿ ಸಮಿತಿಗಳಡಿಯಲ್ಲಿ ರಚಿತವಾಗಿರುವ ಮಹಿಳಾ ಮತ್ತು ಮಕ್ಕಳ ಮಾರಾಟ ತಡೆ ಸಮಿತಿ ಕ್ರಿಯಾಶೀಲವಾಗಿಲ್ಲ. ಸದರಿ ಸಮಿತಿಗಳನ್ನು ಬಲಪಡಿಸಿ ಗ್ರಾಮೀಣ ಮಕ್ಕಳ ಹಾಗೂ ಮಹಿಳೆಯರ ಸಂವಿಧಾನಬದ್ಧ ಹಕ್ಕನ್ನು ರಕ್ಷಣೆ ಮಾಡಬೇಕೆಂಬ ಅಂಶವು ಸಾರ್ವಜನಿಕರಲ್ಲಿ ವ್ಯಕ್ತವಾಗುತ್ತಿದೆ.

ಆದ್ದರಿಂದ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 61(1)(iii)ರಡಿ ಸಾಮಾಜಿಕ ನ್ಯಾಯ ಸಮಿತಿಯನ್ನು ರಚಿಸಲಾಗಿರುತ್ತದೆ. ಉಪ ಪ್ರಕರಣ (iii)(ಬಿ)ರಲ್ಲಿ ಈ ಕೆಳಕಂಡಂತಿದೆ.

**"ಮಹಿಳಾ ಮತ್ತು ಮಕ್ಕಳ ಕಲ್ಯಾಣ:** ಸಾಮಾಜಿಕ ನ್ಯಾಯ ಸಮಿತಿಯು ಮಹಿಳೆಯರ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕವಾಗಿ ಅಭಿವೃದ್ಧಿಗೆ ಅನುವು ಮಾಡಿಕೊಟ್ಟು ಮಹಿಳಾ ಸಬಲೀಕರಣದಂಥ ಮಹಿಳೆಯರಿಗೆ ಸಂಬಂಧಪಡುವ ಹಿತಾಸಕ್ತಿಗಳನ್ನು ಮತ್ತು ವಿಷಯಗಳನ್ನು ಪರಾಮರ್ಶಿಸತಕ್ಕದ್ದು ಮತ್ತು ಗ್ರಾಮ ಪಂಚಾಯತ್ ಪ್ರದೇಶದಲ್ಲಿ ಇರುವ ಮಹಿಳೆಯರಿಗೆ ಕೌಟುಂಬಿಕ ಹಿಂಸೆ ಮತ್ತು ಲೈಂಗಿಕ ಕಿರುಕುಳಗಳಂಥ ಮುಂತಾದ ಅಪರಾಧಗಳ ವಿರುದ್ಧ ರಕ್ಷಣೆ ಒದಗಿಸತಕ್ಕದ್ದು. ಸಾಮಾಜಿಕ ನ್ಯಾಯ ಸಮಿತಿಯ ಪ್ರಕಾರ್ಯಗಳು ಮಹಿಳೆಯರಿಗೆ ಶಾಲೆಗಳಲ್ಲಿ, ಕಛೇರಿಗಳಲ್ಲಿ, ಕಾರ್ಖಾನೆಗಳಲ್ಲಿ, ಆಸ್ಪತ್ರೆಗಳಲ್ಲಿ ಮತ್ತು ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಸಾಕಷ್ಟು ಅನುಕೂಲಗಳನ್ನು ಮತ್ತು ಅವರ ನಿತ್ಯ ಜೀವನದಲ್ಲಿ ಸ್ವಾತಂತ್ರ್ಯ ಮತ್ತು ಘನತೆಯನ್ನು ಖಚಿತಪಡಿಸಿಕೊಳ್ಳುವ ಮೂಲಕ ಪಂಚಾಯಿತಿಗೆ ಸಲಹೆ ನೀಡುವುದನ್ನು ಒಳಗೊಳ್ಳತಕ್ಕದ್ದು" ಎಂದಿದೆ.

ಈ ಸಮಿತಿಯು ಮಕ್ಕಳ ಮತ್ತು ಮಹಿಳೆಯರ ಸಮಸ್ಯೆಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಬೇಕಾಗಿದೆ. ಈ ಸಮಿತಿಯು ಚುನಾಯಿತ ಸದಸ್ಯರುಗಳನ್ನೊಳಗೊಂಡಿದ್ದು, ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ಮಕ್ಕಳ ಮತ್ತು ಮಹಿಳೆಯರ ಸಮಸ್ಯೆಗಳನ್ನು ವಾರ್ಡ್ ಮತ್ತು ಗ್ರಾಮ ಸಭೆಗಳಲ್ಲಿ ಚರ್ಚಿಸಿ, ಗ್ರಾಮಸ್ಥರುಗಳಲ್ಲೂ ಈ ಸಮಸ್ಯೆಗಳನ್ನು ಚರ್ಚಿಸುವ ಮೂಲಕ ಅರಿವು ಮೂಡಿಸುವಂತೆ ಈ ಮೂಲಕ ಸೂಚಿಸಲಾಗಿದೆ.

(ಕೆ. ಯಾಲಕ್ಕಿಗೌಡ) 21/4/16
ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಗೆ:**

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿಗಳು.
2. ಎಲ್ಲಾ ಕಾರ್ಯನಿರ್ವಾಹಕಾಧಿಕಾರಿಗಳು, ತಾಲ್ಲೂಕು ಪಂಚಾಯಿತಿಗಳು.
3. ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.

...2......